-ವ್ಯಾಕ್ಸಿನೇಷನ್ ಅಳವಡಿಸಲು ಕ್ರಮವಹಿಸುವಂತೆ ಹಿರಿಯ ವೆಟರಿನರಿ ಪರಿವೀಕ್ಷಕರು ರವರಿಗೆ ತಿಳಿಸುವಂತೆ ಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

5. <u>ಕಂದಾಯ ವಿಭಾಗದ ಬಗ್ಗೆ:-</u>

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡಿ, ವಾರ್ಡ್‌ನ ಕಂದಾಯ ಪರಿವೀಕ್ಷಕರುಗಳಾದ ಶ್ರೀ.ಕೆ.ಎಸ್.ಸುನೀಲ್‌ಕುಮಾರ್ ಮತ್ತು ಶ್ರೀ ಸಿದ್ದರಾಮೇಶ್ವರ್ ರವರುಗಳು ವರ್ಗಾವಣೆ ಆಗಿರುವ ಹಿನ್ನೆಲೆಯಲ್ಲಿ ಶ್ರೀ ರಾಜಗೋಪಾಲ್ ರವರು ಕಂದಾಯ ಪರಿವೀಕ್ಷಕರಾಗಿ ಸದರಿ ಜಾಗಕ್ಕೆ ಕರ್ತವ್ಯ ನಿರ್ವಹಿಲು ವರದಿ ಮಾಡಿಕೊಂಡಿರುತ್ತಾರೆ ಎಂದು ತಿಳಿಸುತ್ತಾ ಸಭೆಗೆ ಪರಿಚಯ ಮಾಡಿಕೊಟ್ಟರು.
- ಶ್ರೀಮತಿ ಸುಷ್ಮ, ತೆರಿಗೆ ಪರಿವೀಕ್ಷಕರು, ವಾರ್ಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕಂದಾಯ ಸಂಗ್ರಹಣೆಯಾಗುತ್ತಿದ್ದು, 2022-23ನೇ ಸಾಲಿನಲ್ಲಿ 01-ಏಪ್ರಿಲ್-2022 ರಿಂದ ಇಲ್ಲಿಯವರೆಗೆ ಬಾಕಿ ಹಾಗೂ ಪ್ರಸ್ತುತ ಸಾಲಿನ ಒಟ್ಟು ಮೊತ್ತ ರೂ. 4.10 ಕೋಟಿಗಳಷ್ಟು ಕಂದಾಯ ಸಂಗ್ರಹವಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

6. <u>ಅರಣ್ಯ ವಿಭಾಗದ ಬಗ್ಗೆ:-</u>

- ಶ್ರೀ ಕೆ. ಗಣೇಶ್, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಕಿರ್ಲೋಸ್ಕರ್ ಕಾಲೋನಿ 3ನೇ ಹಂತ 15ನೇ ಮುಖ್ಯರಸ್ತೆಯಲ್ಲಿ ಟ್ರಾನ್ಸ್‌ಫಾರ್ಮರ್ ಬಳಿಯಲ್ಲಿ ಮರದ ರೆಂಬೆಗಳನ್ನು ತೆರವುಗೊಳಿಸಲಾಗಿದ್ದು ಅದರ ಅವಶೇಷಗಳನ್ನು ತೆರವುಗೊಳಿಸದೇ ಹಾಗೇ ಬಿಟ್ಟಿರುವುದಾಗಿ ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಶೀಘ್ರವಾಗಿ ಸದರಿ ಸ್ಥಳವನ್ನು ಪರಿಶೀಲಿಸಿ ತೆರವುಗೊಳಿಸಲು ಸೂಕ್ತ ಕ್ರಮವಹಿಸುವುದು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಮಳೆಯಿಂದಾಗಿ ರಾತ್ರಿ ವೇಳೆಯಲ್ಲಿ ಮರಗಳು ಬಿದ್ದಾಗ ಶೀಘ್ರವಾಗಿ ತೆರವುಗೊಳಿಸಲು ಕ್ರಮವಹಿಸಲು ಸಭೆಯಲ್ಲಿ ತಿಳಿಸಿದರು.
- ಶ್ರೀ ಮಲ್ಲಪ್ಪ, ಮೇಸ್ತ್ರಿ, ಅರಣ್ಯ ವಿಭಾಗ ರವರು ಮಾತನಾಡುತ್ತಾ, ಬೆಳಗಿನ ಸಮಯದಲ್ಲಿ ಕಾರ್ಯ ನಿರ್ವಹಿಸಲು ಪಶ್ಚಿಮ ವಲಯದ 6 ವಿಭಾಗಗಳಿಗೆ 6 ವಾಹನಗಳು ಹಾಗೂ ರಾತ್ರಿ ವೇಳೆಯಲ್ಲಿ ಕಾರ್ಯ ನಿರ್ವಹಿಸಲು ಇಡೀ ಪಶ್ಚಿಮ ವಲಯಕ್ಕೆ ಒಂದೇ ಒಂದು ವಾಹನವನ್ನು ಮಂಜೂರು ಮಾಡಿರುತ್ತಾರೆ ಹಾಗಾಗಿ ಮಳೆಗಾಲವಾಗಿರುವುದರಿಂದ ಎಲ್ಲಾ ಕಡೆ ಮರಗಳು ಬೀಳುತ್ತಿದ್ದು, ಎಲ್ಲಾ ಕಡೆ ಏಕ ಕಾಲದಲ್ಲಿ ಕಾರ್ಯ ನಿರ್ವಹಿಸುವುದು ಕಷ್ಟಕರವಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಹೆಚ್ಚುವರಿಯಾಗಿ ವಾಹನಗಳನ್ನು ಮಂಜೂರು ಮಾಡಲು ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

7. <u>ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಕಸ ವಿಲೇವಾರಿ ಆಟೋಗಳು ಸರಿಯಾಗಿ ಬರುತ್ತಿಲ್ಲ, ಕಸ ಸರಿಯಾಗಿ ವಿಲೇವಾರಿ ಆಗುತ್ತಿಲ್ಲ ಎಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಕಸ ವಿಲೇವಾರಿ ಆಟೋಗಳನ್ನು ಸರಿಯಾಗಿ ನಿರ್ವಹಣೆ ಮಾಡಲು ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ನಿರಂಜನ್, ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.

8. <u>ತೋಟಗಾರಿಕೆ ವಿಭಾಗದ ಬಗ್ಗೆ:-</u>

- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಉದ್ಯಾನವನಗಳಲ್ಲಿ ಯಾವುದೇ ದೂರುಗಳು ಬಾರದಂತೆ ಸೂಕ್ತ ಕ್ರಮವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ಪುಟ್ಟಸ್ವಾಮಿ, ಗುತ್ತಿಗೆದಾರರು, ಉದ್ಯಾನವನಗಳ ನಿರ್ವಹಣೆ, ತೋಟಗಾರಿಕೆ ಇಲಾಖೆ ರವರಿಗೆ ಸಭೆಯಲ್ಲಿ ತಿಳಿಸಿದರು.

9. <u>ವಿದ್ಯುತ್ ವಿಭಾಗದ ಬಗ್ಗೆ:-</u>

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಕಮಲಾನಗರ ಹಾಗೂ ಕುರುಬರಹಳ್ಳಿಯ ಕೆಲವು ಬೀದಿಗಳಲ್ಲಿ ಲೈಟ್ ಆನ್/ ಆಫ್ ಆಗುವುದು ತಡವಾಗುತ್ತಿದ್ದು, ಇದರಿಂದಾಗಿ ವಿದ್ಯುಚ್ಛಕ್ತಿಯು ಪೋಲಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ಮಾತನಾಡುತ್ತಾ, ಸದರಿ ಸ್ಥಳಗಳನ್ನು ಪರಿಶೀಲಿಸುವುದು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿರುವ ಎಲ್ಲಾ ಉದ್ಯಾನವನಗಳಲ್ಲಿ ಯಾವುದೇ ದೂರುಗಳು ಬಾರದಂತೆ ಸೂಕ್ತ ಕ್ರಮವ-

ಮು.ತಿ.ನೋ.

Scanned by CamScanner

